# ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:** ಇಲಾಖೆಯಲ್ಲಿ ಲಭ್ಯವಿರುವ ವಿದ್ಯಾರ್ಥಿಗಳ ಶೈಕ್ಷಣಿಕ ದಾಖಲೆಗಳನ್ನು ನ್ಯಾಷನಲ್ ಅಕಾಡೆಮಿಕ್ ಡಿಪಾಸಿಟರಿ (NAD) ಪೋರ್ಟಲ್‌ನಲ್ಲಿ ಅಪ್‌ಲೋಡ್ ಮಾಡಲು ನೋಡಲ್ ಅಧಿಕಾರಿಯನ್ನು ನೇಮಿಸುವ ಬಗ್ಗೆ.

**ಓದಲಾಗಿದೆ:** ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ, ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ (ಇ-ಆಡಳಿತ) ಇವರ ಪತ್ರ ಸಂಖ್ಯೆ: CeG-NADoADMN/1/2021 ದಿನಾಂಕ: 04/01/2022.

*******

**ಪ್ರಸ್ತಾವನೆ:**

ಮೇಲೆ ಓದಲಾದ ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ, ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ (ಇ–ಆಡಳಿತ) ಇವರ ಪತ್ರದಲ್ಲಿ ಮಾಹಿತಿ ತಂತ್ರಜ್ಞಾನದ ಬಳಕೆಯ ಮೂಲಕ ಶಿಕ್ಷಣ ಕ್ಷೇತ್ರದಲ್ಲಿ ಸುಧಾರಣೆಗಳನ್ನು ತರುವ ಪ್ರಯತ್ನದಲ್ಲಿ ಭಾರತ ಸರ್ಕಾರವು ನ್ಯಾಷನಲ್ ಅಕಾಡೆಮಿಕ್ ಡಿಪಾಸಿಟರಿ (NAD) ಎಂಬ ಶೈಕ್ಷಣಿಕ ದಾಖಲೆಗಳ ಕೇಂದ್ರೀಕೃತ ಡಿಜಿಟಲ್ ಡೆಪೋಸಿಟರಿಯನ್ನು ಸ್ಥಾಪಿಸಿದ್ದು, ಇದು 24*7 ಆನ್‌ಲೈನ್ ಡೆಪೋಸಿಟರಿಯಾಗಿದ್ದು, ಎಲ್ಲಾ ಶೈಕ್ಷಣಿಕ ದಾಖಲೆಗಳನ್ನು ಸುಲಭವಾಗಿ ಡಿಜಿಲಾಕರ್ ತಂತ್ರಾಂಶದ ಮೂಲಕ ಡಿಜಿಟಲ್ ಸ್ವರೂಪದಲ್ಲಿ ಪಡೆಯಲು ಅನುಕೂಲವಾಗಲಿದೆ. ಮುಂದುವರೆದು, ಕೌಶಲ್ಯಾಭಿವೃದ್ಧಿ ಉದ್ಯಮಶೀಲತೆ ಮತ್ತು ಜೀವನೋಪಾಯ ಇಲಾಖೆಯು ವಿವಿಧ ಕಾರ್ಯಕ್ರಮಗಳ ಅಡಿಯಲ್ಲಿ ವಿದ್ಯಾರ್ಥಿ/ಯುವಕರಿಗೆ ವಿವಿಧ ತರಬೇತಿ ಸೌಲಭ್ಯಗಳನ್ನು ಮತ್ತು ಉದ್ಯೋಗಾವಕಾಶಗಳನ್ನು ಒದಗಿಸಿ ವಿದ್ಯಾರ್ಥಿಗಳಿಗೆ ಪ್ರಮಾಣ ಪತ್ರ ನೀಡುತ್ತಿದ್ದು, ವಿವಿಧ ಕೋರ್ಸ್‌ಗಳು ಮತ್ತು ಕಾರ್ಯಕ್ರಮಗಳ ಅಡಿಯಲ್ಲಿ ತರಬೇತಿ ಪಡೆದ ವಿದ್ಯಾರ್ಥಿಗಳ ಪ್ರಮಾಣಪತ್ರಗಳನ್ನು NAD ನಲ್ಲಿ ಪ್ರಕಟಿಸುವುದರಿಂದ ಸದರಿ ಪ್ರಮಾಣ ಪತ್ರಗಳು ಡಿಜಿಲಾಕರ್ ಮೂಲಕ ಡಿಜಿಟಲ್ ಸ್ವರೂಪದಲ್ಲಿ ಲಭ್ಯವಾಗಲಿದ್ದು, ಇದರಿಂದ ನಕಲಿ ಪ್ರಮಾಣಪತ್ರಗಳ ನೀಡುವಿಕೆಯನ್ನು ಕಡಿಮೆ ಮಾಡಬಹುದಾಗಿದೆ. ಆದ್ದರಿಂದ ನ್ಯಾಷನಲ್ ಅಕಾಡೆಮಿಕ್ ಡಿಪಾಸಿಟರಿ (NAD) ಯೋಜನೆಯನ್ನು ಅನುಷ್ಠಾನಗೊಳಿಸಲು ಹಾಗೂ ಮಾಹಿತಿಯನ್ನು ಇಲಾಖೆಯ ವೆಬ್‌ಸೈಟ್‌ನಲ್ಲಿ ಪ್ರಕಟಿಸಲು ಅನುವಾಗುವಂತೆ ಕೌಶಲ್ಯ ಅಭಿವೃದ್ಧಿ ಉದ್ಯಮಶೀಲತೆ ಮತ್ತು ಜೀವನೋಪಾಯ ಇಲಾಖೆ ವತಿಯಿಂದ ನೋಡಲ್ ಅಧಿಕಾರಿಯನ್ನು ನೇಮಿಸುವಂತೆ ಕೋರಿರುತ್ತಾರೆ.

ಪ್ರಸ್ತಾವನೆಯನ್ನು ಪರಿಶೀಲಿಸಿ ಈ ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರಿ ಆದೇಶ ಸಂಖ್ಯೆ: ಕೌಉಜೀಇ 256 ಕೈತಇ 2021 ಬೆಂಗಳೂರು, ದಿನಾಂಕ: 24/01/2022.**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, ಕೈಗಾರಿಕಾ ತರಬೇತಿ ಮತ್ತು ಉದ್ಯೋಗ ಇಲಾಖೆಗೆ ಸಂಬಂಧಿಸಿದಂತೆ ವಿದ್ಯಾರ್ಥಿಗಳ ಶೈಕ್ಷಣಿಕ ದಾಖಲೆಗಳನ್ನು ನ್ಯಾಷನಲ್ ಅಕಾಡೆಮಿಕ್ ಡಿಪಾಸಿಟರಿ (NAD) ಪೋರ್ಟಲ್ಲನ್ನಲ್ಲಿ ಅಪ್ಲೋಡ್ ಮಾಡುವ ಸಂಬಂಧ ಜಂಟಿ ನಿರ್ದೇಶಕರು (ತರಬೇತಿ) (ಪರೀಕ್ಷೆ), ಕೈಗಾರಿಕಾ ತರಬೇತಿ ಮತ್ತು ಉದ್ಯೋಗ ಇಲಾಖೆ ಹಾಗೂ ಪದನಿಮಿತ್ತ ನಿಯಂತ್ರಕರು, ಪರೀಕ್ಷಾ ಮಂಡಳಿ, ಕೈಗಾರಿಕಾ ತರಬೇತಿ ಮತ್ತು ಉದ್ಯೋಗ ಇಲಾಖೆ, ಬೆಂಗಳೂರು ಇವರನ್ನು ನೋಡಲ್ ಅಧಿಕಾರಿಯನ್ನಾಗಿ ನೇಮಿಸಿ ಆದೇಶಿಸಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ
24/01/2022
(ರಂಗನಾಥ)
ಸರ್ಕಾರದ ಅಧೀನ ಕಾರ್ಯದರ್ಶಿ
ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು
ಜೀವನೋಪಾಯ ಇಲಾಖೆ

24/01/2022

**ಇವರಿಗೆ:**

1. ಮಹಾಲೇಖಪಾಲರು (ಎ&ಇ), (ಜಿ&ಎಸ್ಎಸ್ಎ), (ಇ&ಆರ್ಎಸ್ಎ), ಕರ್ನಾಟಕ, ಬೆಂಗಳೂರು.

2. ಆಯುಕ್ತರು, ಕೈಗಾರಿಕಾ ತರಬೇತಿ ಮತ್ತು ಉದ್ಯೋಗ ಇಲಾಖೆ, ಬೆಂಗಳೂರು.
3. ಯೋಜನಾ ನಿರ್ದೇಶಕರು (NAD) ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ (ಇ–ಆಡಳಿತ), ಬಹುಮಹಡಿ ಕಟ್ಟಡ, ಬೆಂಗಳೂರು.
4. ಸರ್ಕಾರದ ಪ್ರಧಾನ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿ ಗ್ರೇಡ್–2, ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಇಲಾಖೆ.
5. ಸರ್ಕಾರದ ಅಪರ ಕಾರ್ಯದರ್ಶಿಯವರ ಆಪ್ತ ಸಹಾಯಕರು, ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಇಲಾಖೆ.
6. ಶಾಖಾ ರಕ್ಷಾ ಕಡತ / ಹೆಚ್ಚುವರಿ ಪ್ರತಿ.